PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 6/6/2020

# ಮೀನುಗಾರರಿಗೆ ಕಿಸಾನ್ ಕ್ರೆಡಿಟ್ ಕಾರ್ಡ್

6/6/20

[redacted]

ಪಶು ಪಾಲಕರು ಹಾಗೂ ಮೀನುಗಾರರಿಗೂ ಕಿಸಾನ್ ಕ್ರೆಡಿಟ್ ಕಾಡ್ ಸೌಲಭ್ಯ ವಿಸ್ತರಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದ್ದಾರೆ.

ಪಶುಸಂಗೋಪನಾ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಕೇಂದ್ರ ಸರ್ಕಾರ ಪಶು ಪಾಲಕರು ಹಾಗೂ ಮೀನುಗಾರರಿಗೆ ಕಿಸಾನ್ ಕ್ರೆಡಿಟ್ ಕಾರ್ಡ್ ಸೌಲಭ್ಯ ವಿಸ್ತರಿಸಲು ಅನುಮತಿ ನೀಡಿದ್ದು, ಈ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳುವ ಕುರಿತು ಫಲಾನುಭವಿಗಳಿಗೆ ತಿಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು

ಕಿಸಾನ್ ಕ್ರೆಡಿಟ್ ಕಾರ್ಡ್ ಮೂಲಕ ಪಶುಪಾಲನಾ ಚಟುವಟಿಕೆಗೆ ಒಂದರಿಂದ ಮೂರು ಲಕ್ಷ ರೂ.ಗಳ ವರೆಗೆ ಬಡ್ಡಿ ರಹಿತ ಮುಂಗಡ ಪಡೆಯಬಹುದಾಗಿದೆ. ಆದ್ದರಿಂದ ರೈತರು ಇದರ ಸದುಪಯೋಗ ಪಡೆದುಕೊಳ್ಳುವ ನಿಟ್ಟಿನಲ್ಲಿ ಕ್ರಮ ವಹಿಸಬೇಕು ಎಂದರಲ್ಲದೆ ರಾಜ್ಯದ ಶಿವಮೊಗ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಮಂಗನಕಾಯಿಲೆ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಲಸಿಕೆ ಉತ್ಪಾದನೆ ಹೆಚ್ಚಿಸಲು ಕ್ರಮ ತೆಗೆದುಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಮುಖ್ಯಮಂತ್ರಿಗಳು ಸೂಚಿಸಿದರು.



ಇದೇ ವೇಳೆ ಅಧಿಕಾರಿಗಳು ಪಶುಸಂಗೋಪನೆ ಇಲಾಖೆಯಿಂದ ಕೈಗೊಂಡ ಕ್ರಮಗಳನ್ನು ವಿವರಿಸಿ, ಕೊರೊನಾದಿಂದಾಗಿ ಲಾಕ್ ಡೌನ್ ಸಂದರ್ಭದಲ್ಲಿ 80 ಕೋಟಿ ರೂ. ವೆಚ್ಚದಲ್ಲಿ ಕೊಳೆಗೇರಿಗಳಲ್ಲಿ ಪ್ರತಿ ದಿನ 7.75 ಲಕ್ಷ ಲೀಟರ್ ಹಾಲನ್ನು ಉಚಿತವಾಗಿ ವಿತರಿಸಲಾಗಿದೆ. ಅಲ್ಲದೆ ಮಾಂಸ ಮಾರಾಟ, ಸಾಗಾಣಿಕೆ ಸರಪಣಿ ಸಮರ್ಪಕವಾಗಿ ಕಾರ್ಯನಿರ್ವಹಿಸುವ ಕುರಿತು ಕ್ರಮ ವಹಿಸಲಾಗಿದೆ. ಮೈಸೂರು ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಕಾಣಿಸಿಕೊಂಡ ಕೋಳಿ ಜ್ವರ ಹಾಗೂ ಬೀದರ್‌ನಲ್ಲಿ ಕಾಣಿಸಿಕೊಂಡ ಹಂದಿ ಜ್ವರ ಸೋಂಕನ್ನು ಯಶಸ್ವಿಯಾಗಿ ನಿಯಂತ್ರಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಪಶುಸಂಗೋಪನಾ ಸಚಿವ ಪ್ರಭು ಚವ್ಹಾಣ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್, ಅಪರ ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮಾ, ಪಶುಸಂಗೋಪನಾ ಇಲಾಖೆ ಕಾರ್ಯದರ್ಶಿ ಪಿ. ಮಣಿವಣ್ಣನ್ ಮತ್ತಿತರ ಅಧಿಕಾರಿಗಳಿದ್ದರು.